Akashvani : Bangalore
Regional Bulletin In Kannada
06.01.2025 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ಎಚ್‌ಎಮ್‌ಪಿ ವೈರಸ್ ಬಗ್ಗೆ ಆತಂಕಪಡುವ ಅಗತ್ಯವಿಲ್ಲ - ಆರೋಗ್ಯ ಸಚಿವ ದಿನೇಶ್ ಗುಂಡೂರಾವ್
- ಕೆ.ಎಸ್.ಆರ್.ಟಿ.ಸಿ ಆರೋಗ್ಯ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ
- ಸರ್ಕಾರದ ಮನವಿ ಹಿನ್ನೆಲೆ; ರಾಜ್ಯದಲ್ಲಿ ಆರು ಮಂದಿ ನಕ್ಸಲರು ಶರಣಾಗತಿಗೆ ನಿರ್ಧಾರ
- ಮೈಸೂರಿನ ಖಾಸಗಿ ಸಂಸ್ಥೆಯ ಆವರಣದಲ್ಲಿ ಏಳನೇ ದಿನವೂ ಮುಂದುವರಿದ ಚಿರತೆ ಸೆರೆ ಕಾರ್ಯಾಚರಣೆ
- ನಾಡೋಜ ಹಿರಿಯ ಸಾಹಿತಿ ಡಾ.ನಾ ಡಿಸೋಜ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರಿಂದ ಸಂತಾಪ

<><*<><>*><>

ಭಾರತೀಯ ವೈದ್ಯಕೀಯ ಸಂಶೋಧನಾ ಸಮಿತಿ - ಐಸಿಎಮ್‌ಆರ್, ಕರ್ನಾಟಕದಲ್ಲಿ ಎರಡು ಹ್ಯೂಮನ್ ಮೆಟಾ ನ್ಯೂಮೋವೈರಸ್ - ಹೆಚ್‌ಎಮ್‌ಪಿವಿ ಪ್ರಕರಣಗಳನ್ನು ಪತ್ತೆಹಚ್ಚಿದೆ. ದೇಶಾದ್ಯಂತ ಉಸಿರಾಟದ ಕಾಯಿಲೆಗಳನ್ನು ಮೇಲ್ವಿಚಾರಣೆ ಮಾಡಲು Iಅಒಖ ನಡೆಯುತ್ತಿರುವ ಪ್ರಯತ್ನಗಳ ಭಾಗವಾಗಿ, ಈ ಎರಡೂ ಪ್ರಕರಣಗಳನ್ನು ಗುರುತಿಸಲಾಗಿದೆ. ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾರ್ಗಸೂಚಿ ಹೊರಡಿಸಿದ್ದು, ಕಫ ಮತ್ತು ಸೀನುವಾಗ ಕರವಸ್ತ್ರ ಅಥವಾ ಟಿಶ್ಯು ಪೇಪರ್‌ನಿಂದ ಮುಖವನ್ನು ಮುಚ್ಚಿಕೊಳ್ಳುವುದು, ಕೈಗಳನ್ನು ಆಗಾಗ ಸೋಪು ಅಥವಾ ಸ್ಯಾನಿಟೈಜರ್‌ನಿಂದ ಶುಚಿಗೊಳಿಸುವುದು, ಜನಸಂದಣಿ ಪ್ರದೇಶಗಳಿಂದ ಅಂತರ ಕಾಪಾಡಿಕೊಳ್ಳುವುದು, ಸಾಕಷ್ಟು ನೀರು ಕುಡಿಯುವುದು ಹಾಗೂ ಪೌಷ್ಟಿಕಾಂಶಯುಕ್ತ ಆಹಾರ ಸೇವಿಸಲು ಸಲಹೆ ನೀಡಿದೆ. ಇದೇ ವೇಳೆ ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವುದು, ವೈದ್ಯರನ್ನು ಸಂಪರ್ಕಿಸದೆ ಔಷಧಿ ಸೇವಿಸುವುದು ಹಾಗೂ ಕಣ್ಣು, ಮೂಗು ಮತ್ತು ಬಾಯಿಯನ್ನು ಆಗಾಗ್ಗೆ ಸ್ಪರ್ಶಿಸುವುದು ಸೇರಿದಂತೆ ಸೋಂಕು ಹರಡಲು ಸಹಕಾರಿಯಾಗುವಂತಹ ಯಾವುದೇ ಪ್ರಕ್ರಿಯೆಯಲ್ಲಿ ತೊಡಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚಿಸಲಾಗಿದೆ.

<><*<><>*><>

ಎಚ್‌ಎಂಪಿವಿ ಹೊಸ ವೈರಸ್ ಅಲ್ಲ. ಹೀಗಾಗಿ ಯಾರು ಆತಂಕ ಪಡುವ ಅಗತ್ಯವಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿರುವ

ಅವರು, ಬೆಂಗಳೂರಿನಲ್ಲಿ ಮಗುವೊಂದರಲ್ಲಿ ಕಂಡುಬಂದಿರುವ ವೈರಸ್ ಭಾರತದಲ್ಲಿ ಇದು ಮೊದಲ ಪ್ರಕರಣ ಎಂದು ಹೇಳಲಾಗುತ್ತಿದೆ. ಆದರೆ, ಇದು ನಿಜವಲ್ಲ ಎಂದು ಹೇಳಿದ್ದಾರೆ. ಈ ವೈರಸ್ ಕಡಿಮೆ ಇಮ್ಯೂನಿಟಿ ಹೊಂದಿರುವ ಮಕ್ಕಳಿಗೆ ಬಂದಿದ್ದು, ಮಗುವಿಗೆ ಯಾವುದೇ ಟ್ರಾವೆಲ್ ಹಿಸ್ಟರಿ ಇಲ್ಲ. ಇಲ್ಲಿ ಕಂಡುಬಂದಿರುವ ವೈರಸ್‌ಗೂ  ಚೀನಾ ವೈರಸ್‌ಗೂ ಸಂಬಂಧವಿಲ್ಲ ಎಂದು ತಿಳಿಸಿದ್ದಾರೆ.

ಧ್ವನಿ: ದಿನೇಶ್ ಗುಂಡೂರಾವ್, ಸಚಿವ

<><*<><>*><>

ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯ ನೌಕರರಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸಾ ಯೋಜನೆ "ಕೆ.ಎಸ್.ಆರ್.ಟಿ.ಸಿ ಆರೋಗ್ಯ"ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು. ಈ ಯೋಜನೆಯಡಿ ಒಡಂಬಡಿಕೆ ಮಾಡಿಕೊಂಡಿರುವ ಎಲ್ಲಾ ಆಸ್ಪತ್ರೆಗಳು ಕೆ.ಎಸ್.ಆರ್.ಟಿ.ಸಿ ನೌಕರರು ಮತ್ತು ಕುಟುಂಬದವರು ಚಿಕಿತ್ಸೆಗೆ ಬಂದ ಸಂದರ್ಭದಲ್ಲಿ ಅವರನ್ನು ಗೌರವಯುತವಾಗಿ ಹಾಗೂ  ಮಾನವೀಯತೆಯಿಂದ ಚಿಕಿತ್ಸೆಯನ್ನು ನೀಡಲು ಮುಂದಾಗಬೇಕು ಎಂದು ಕರೆ ನೀಡಿದರು.

ಧ್ವನಿ: ಮುಖ್ಯಂಮತ್ರಿ ಸಿದ್ದರಾಮಯ್ಯ

"ಕೆ.ಎಸ್.ಆರ್.ಟಿ.ಸಿ ಆರೋಗ್ಯ" ಯೋಜನೆಯಡಿ ಎಲ್ಲಾ ನೌಕರರು, ಅವರ ತಂದೆ, ತಾಯಿ ಮತ್ತು ಮಕ್ಕಳಿಗೆ ಯಾವುದೇ ಖಾಯಿಲೆ ಅಥವಾ ಖರ್ಚಿನ ಮಿತಿಯಿಲ್ಲದೆ ವೈದ್ಯಕೀಯ ಚಿಕಿತ್ಸೆ ನೀಡಲು ನಿರ್ಧರಿಸಲಾಗಿದೆ. ಈ ಯೋಜನೆ ಅನುಷ್ಠಾನಕ್ಕಾಗಿ ರಾಜ್ಯಾದ್ಯಂತ ಇರುವ ಸರ್ಕಾರಿ ಆಸ್ಪತ್ರೆಗಳು ಸೇರಿದಂತೆ ಒಟ್ಟು ೨೫೦  ಖಾಸಗಿ ಆಸ್ಪತ್ರೆಗಳೊಂದಿಗೆ ಒಡಂಬಡಿಕೆ ಮಾಡಲಾಗಿದೆ. ಇದೇ ವೇಳೆ, ಕೆ.ಎಸ್.ಆರ್.ಟಿ.ಸಿ ನೌಕರರು ಅಪಘಾತದಲ್ಲಿ ಮೃತಪಟ್ಟ ಸಂದರ್ಭದಲ್ಲಿ ನೌಕಕರರ ಕುಟುಂಬಕ್ಕೆ ನೀಡಲಾಗುವ ೧ ಕೋಟಿ ರೂಪಾಯಿ ಹಾಗೂ ಸೇವೆಯಲ್ಲಿರುವ ಮೃತಪಟ್ಟ ನೌಕಕರರ ಕುಟುಂಬಕ್ಕೆ ನೀಡಲಾಗುವ ತಲಾ ೧೦ ಲಕ್ಷ ರೂಪಾಯಿ ಪರಿಹಾರದ ಚೆಕ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿತರಿಸಿದರು.

<><*<><>*><>

ಬಸ್ ದರ ಏರಿಕೆ ಜನ ವಿರೋಧಿಯಾಗಿದೆ ಎಂದು ಸಂಸದ, ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಲೆ ಏರಿಕೆಯಿಂದಾಗಿ ರಾಜ್ಯದಲ್ಲಿ ಜನತ ತತ್ತರಿಸಿ ಹೋಗಿದ್ದಾರೆ ಎಂದು ದೂರಿದ್ದಾರೆ. ಸರ್ಕಾರದ ದುರಾಡಳಿತ, ಅಭಿವೃದ್ಧಿ ಶೂನ್ಯದ ಪ್ರತಿಫಲವೇ ದರ ಏರಿಕೆಗೆ ಕಾರಣ ಎಂದು ತಿಳಿಸಿದ್ದಾರೆ.

ಧ್ವನಿ: ಸಂಸದ ಬಸವರಾಜ ಬೊಮ್ಮಾಯಿ

ರಾಜ್ಯ ಸರ್ಕಾರದ ಶೇಕಡ ೬೦ರಷ್ಟು ಕಮಿಷನ್ ಆರೋಪಕ್ಕೆ ದಾಖಲೆ ಕೊಡಿ ಎನ್ನುವ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಬಿಜೆಪಿ ಆಡಳಿತದಲ್ಲಿ ಶೇ ೪೦ ಕಮಿಷನ್ ಆರೋಪ ಮಾಡಿದಾಗ ಏನು ದಾಖಲೆ ಕೊಟ್ಟಿದ್ದರು ಎಂದು ಪ್ರಶ್ನಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಪತ್ತೆಯಾಗಿರುವ ಎಚ್‌ಎಂಪಿ ವೈರಸ್ ಬಗ್ಗೆ ಮುಂಜಾಗ್ರತಾ ಕ್ರಮ ಕೈಗೊಳ್ಳಲು ಆರೋಗ್ಯ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ವೈರಸ್ ಬಗ್ಗೆ ಪ್ರತಿಕ್ರಿಯಿಸಿರುವ ಅವರು, ಆರೋಗ್ಯ ಸಚಿವರು, ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸುತ್ತಿದ್ದಾರೆ. ಆರೋಗ್ಯ ಇಲಾಖೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಈ ವೈರಸ್ ಬಗ್ಗೆ ಮುಂಜಾಗ್ರತಾ ಕ್ರಮ ಕೈಗೊಳ್ಳಲಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ನಾಳೆ ದಕ್ಷಿಣ ಕನ್ನಡ ಜಿಲ್ಲೆಗೆ ಆಗಮಿಸಲಿದ್ದು, ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಶ್ರೀ ಕ್ಷೇತ್ರ ಧರ್ಮಸ್ಥಳದಲ್ಲಿ ಭಕ್ತರಿಗಾಗಿ ನಿರ್ಮಿಸಿರುವ ನೂತನ ಸಂಕೀರ್ಣ 'ಶ್ರೀ ಸಾನಿಧ್ಯ'ವನ್ನು ಉದ್ಘಾಟಿಸಲಿದ್ದಾರೆ. ಬಳಿಕ ಅವರು, ಜ್ಞಾನದೀಪ ಕಾರ್ಯಕ್ರಮಗಳಿಗೆ ಚಾಲನೆ ನೀಡಲಿದ್ದಾರೆ. ರಾಜ್ಯಸಭಾ ಸದಸ್ಯ, ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ.

<><*<><>*><>

ರಾಜ್ಯದಲ್ಲಿ ನಕ್ಸಲರು ಸಮಾಜದ ಮುಖ್ಯವಾಹಿಗೆ ಮರಳಬೇಕು ಎಂದು ಸರ್ಕಾರ ಮನವಿ ಮಾಡಿದ ಬೆನ್ನಲ್ಲೆ ಸುಮಾರು ೬ ಮಂದಿ ನಕ್ಸಲರು ಶರಣಾಗತಿಗೆ ನಿರ್ಧರಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ನಕ್ಸಲ್ ಶರಣಗತಿ ಸಮಿತಿ ಹಾಗೂ ಶಾಂತಿಗಾಗಿ ನಾಗರೀಕ ವೇದಿಕೆ ಮೂಲಕ ಶರಣಾಗತಿಯಾಗಲಿದ್ದಾರೆ. ಈಗಾಗಲೇ ಈ ಕುರಿತಾಗಿ ಸಭೆಗಳು ನಡೆದಿದ್ದು, ಇನ್ನೆರಡು ದಿನಗಳಲ್ಲಿ ಶರಣಾಗತಿ ಆಗುವ ಸಾಧ್ಯತೆ ಇದೆ. ಮಂಡಗದ್ದೆ ಲತಾ, ವಸಂತ್, ವನಜಾಕ್ಷಿ ಸೇರಿ ೬ ಮಂದಿ ನಕ್ಸಲರು ಮರಳಿ ಸಮಾಜದ ಮುಖ್ಯವಾಹಿನಿಗೆ ಮರಳಿದ್ದಾರೆ ಎಂದು ಚಿಕ್ಕಮಗಳೂರಿನಲ್ಲಿ ನಕ್ಸಲ್ ಶರಣಾಗತಿ ಸಮಿತಿಯ ಸದಸ್ಯರೊಬ್ಬರು ತಿಳಿಸಿದ್ದಾರೆ.

<><*<><>*><>

ಮೈಸೂರಿನ ಹೆಬ್ಬಾಳು ಕೈಗಾರಿಕಾ ಪ್ರದೇಶದಲ್ಲಿರುವ ಖಾಸಗಿ ಸಂಸ್ಥೆ ಆವರಣದಲ್ಲಿ ಕಾಣಿಸಿಕೊಂಡಿದ್ದ ಚಿರತೆ ಸೆರೆ ಕಾರ್ಯಾಚರಣೆ ೭ ದಿನವೂ ಮುಂದುವರೆದಿದೆ. ಈ ಹಿನ್ನೆಲೆಯಲ್ಲಿ ಸಂಸ್ಥೆಯ ಸಿಬ್ಬಂದಿಗೆ ವರ್ಕ್ ಫ್ರಮ್ ಹೋಂ ಮುಂದುವರಿದಿದೆ. ಚಿರತೆಯ ಚಲನವಲನದ ಬಗ್ಗೆ

ಈವರೆಗೆ ಸುಳಿವು ಕಂಡುಬಂದಿಲ್ಲ. ಡಿಸೆಂಬರ್ ೩೧ರಂದು ಮುಂಜಾನೆ ಸಂಸ್ಥೆಯ ಭದ್ರತಾ ಸಿಬ್ಬಂದಿ ಜೀಪ್‌ಗೆ ಅಡ್ಡಲಾಗಿ ಹಾದು ಹೋಗಿದ್ದ ಚಿರತೆಯ ಚಲನವಲನ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿತ್ತು. ಚಿರತೆ ಸೆರೆಗಾಗಿ ಸಂಸ್ಥೆಯ ಆವರಣದಲ್ಲಿ ೧೨ಕ್ಕೂ ಹೆಚ್ಚು ಕ್ಯಾಮೆರಾ ಟ್ರ್ಯಾಪ್‌ಗಳನ್ನು ಅಳವಡಿಸಲಾಗಿದೆ.  "ಅರಣ್ಯ ಇಲಾಖೆಯ ಚಿರತೆ ಕಾರ್ಯ ಪಡೆ ಹಾಗೂ ಮೈಸೂರು ಪ್ರಾದೇಶಿಕ ವಲಯದ ಸಿಬ್ಬಂದಿ ಚಿರತೆ ಸೆರೆ ಕಾರ್ಯಾಚರಣೆ ನಡೆಸುತ್ತಿದ್ದಾರೆ.

<><*<><>*><>

ನಾಡೋಜ ಹಿರಿಯ ಸಾಹಿತಿ ಡಾ.ನಾ.ಡಿಸೋಜ ವಯೋಸಹಜ ಆರೋಗ್ಯ ಸಮಸ್ಯೆಯಿಂದ ಮಂಗಳೂರಿನ ಫಾದರ್ ಮುಲ್ಲರ್ ಆಸ್ಪತ್ರೆಯಲ್ಲಿ ನಿನ್ನೆ ರಾತ್ರಿ ಕೊನೆಯುಸಿರೆಳೆದಿದ್ದಾರೆ. ಅವರಿಗೆ ೮೭ ವರ್ಷ ವಯಸ್ಸಾಗಿತ್ತು.. ಅವರ ಪಾರ್ಥಿವ ಶರೀರವನ್ನು ಇಂದು ಮಧ್ಯಾಹ್ನದ ನಂತರ ಸಾಗರದ ಅವರ ಸ್ವಗೃಹದಲ್ಲಿ ಅಂತಿಮ ದರ್ಶನಕ್ಕೆ ಇಡಲು ಕುಟುಂಬಸ್ಥರು ನಿರ್ಧರಿಸಿದ್ದಾರೆ. ಹಿರಿಯ ಸಾಹಿತಿ ನಾ.ಡಿಸೋಜಾ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಶಾಲಾಶಿಕ್ಷಣ ಸಚಿವ ಮಧುಬಂಗಾರಪ್ಪ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.  ಮೂಲತ ಶಿವಮೊಗ್ಗ ಜಿಲ್ಲೆಯ ಸಾಗರದಲ್ಲಿ ೧೯೩೭ರ ಜೂನ್ ೬ರಂದು ಜನಿಸಿದ ನಾ.ಡಿಸೋಜಾ ಅವರು, ಪರಿಸರ ಕಾಳಜಿಯುಳ್ಳ ಮಹತ್ವದ ಕಥೆಗಾರರಲ್ಲೊಬ್ಬರಾಗಿದ್ದರು.  ಆರಂಭದ ದಿನಗಳಲ್ಲಿ 'ಪ್ರಪಂಚ' ಪತ್ರಿಕೆಗೆ ಕಥೆಗಳನ್ನು ಬರೆಯುತ್ತಿದ್ದ ಅವರ ಮೊದಲ ಕಾದಂಬರಿ ಬಂಜೆ ಬೆಂಕಿ. ಈ ನೆಲ ಈ ಜಲ, ಕೆಂಪು ತ್ರಿಕೋನ, ನೆಲೆ, ಸೇರಿದಂತೆ ಸುಮಾರು ೪೦ ಕಾದಂಬರಿಗಳನ್ನು ಬರೆದಿದ್ದಾರೆ. ವರ್ಧಮಾನ ಪ್ರಶಸ್ತಿ, ಮಾಸ್ತಿ ಪ್ರಶಸ್ತಿ, ಕುವೆಂಪು ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್, ಆಳ್ವಾಸ್ ನುಡಿಸಿರಿ ಪ್ರಶಸ್ತಿ, ಕೇಂದ್ರಸಾಹಿತ್ಯ ಅಕಾಡೆಮಿಯ ಬಾಲ ಸಾಹಿತ್ಯ ಪುರಸ್ಕಾರ ಸೇರಿದಂತೆ ಹಲವು ಪ್ರಶಸ್ತಿ ಗೌರವಗಳಿಗೆ ನಾ.ಡಿಸೋಜ ಭಾಜನರಾಗಿದ್ದರು.

<><*<><>*><>

ದಾವಣಗೆರೆಯಲ್ಲಿ ನಡೆಯುತ್ತಿರುವ ರಾಜ್ಯ ಮಟ್ಟದ ಯುವಜನೋತ್ಸವದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳ ಕಲಾವಿದರ ಹತ್ತು ಹಲವು ಕಲಾ ಪ್ರಕಾರಗಳು ಮೇಳೈಸಿವೆ. ಶಿವಮೊಗ್ಗ, ಬೆಂಗಳೂರು ಗ್ರಾಮಾಂತರ, ಮಂಡ್ಯ, ಮೈಸೂರು, ಬೆಳಗಾವಿ, ದಕ್ಷಿಣ ಕನ್ನಡ, ರಾಯಚೂರು ಸೇರಿದಂತೆ ರಾಜ್ಯದ ೨೯ ಜಿಲ್ಲೆಗಳಿಂದ ಆಗಮಿಸಿರುವ ಕಲಾವಿದರು ಡೊಳ್ಳು ಕುಣಿತ, ಕೋಲಾಟ, ಜಾನಪದ ಗೀತೆಗಳಿಗೆ ನೃತ್ಯ ಪ್ರದರ್ಶಿಸಿದರು. ೨ ದಿನಗಳ ಉತ್ಸವಕ್ಕೆ ಇಂದು ಸಂಜೆ ತೆರೆ ಬೀಳಲಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>